# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/341/ಗ್ರಾಪಂಅ/2017

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 13-04-2017.

**ಇಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

**ಇವರಿಗೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.

**ವಿಷಯ:** ಗ್ರಾಮ ಪಂಚಾಯತಿಗಳಲ್ಲಿ ತೆರಿಗೆ, ದರ ಮತ್ತು ಫೀಜುಗಳನ್ನು ಪರಿಷ್ಕರಿಸಿ ವಿಧಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ/939/ಗ್ರಾಪಂಅ/2016(1) ದಿನಾಂಕ: 19.11.2016.

*****

ಗ್ರಾಮ ಪಂಚಾಯತಿಗಳು ಆರ್ಥಿಕವಾಗಿ ಸಧೃಡವಾಗಲು, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ಕ್ಕೆ ತಿದ್ದುಪಡಿಯನ್ನು ತರಲಾಗಿದ್ದು, 199ನೇ ಪ್ರಕರಣದ ಅಡಿಯಲ್ಲಿ ಪ್ರತಿಯೊಂದು ಗ್ರಾಮ ಪಂಚಾಯತಿಯು, ಗೊತ್ತುಪಡಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ವಿನಾಯತಿಗೊಳಪಟ್ಟು ಮತ್ತು IV ನೇ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿರುವ ಗರಿಷ್ಠ ದರವನ್ನು ಮೀರದಂತೆ, ಪಂಚಾಯತಿ ಪ್ರದೇಶದ ಪರಿಮಿತಿಗಳೊಳಗಿರುವ, ಕೃಷಿತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಕಟ್ಟಡಗಳು ಮತ್ತು ಭೂಮಿಗಳ ಮೇಲೆ ಸ್ವತ್ತಿನ ಬಂಡವಾಳ ಮೌಲ್ಯದ ಮೇಲೆ (ಕರ್ನಾಟಕ ಸ್ಟ್ಯಾಂಪ್ ಅಧಿನಿಯಮ 1957ರ 45ಬಿ ಪ್ರಕರಣದ ಅಡಿಯಲ್ಲಿ ಪ್ರಕಟಿಸಲಾದ ಮಾರ್ಗಸೂಚಿ ಮಾರುಕಟ್ಟೆ ಮೌಲ್ಯದಲ್ಲಿ ಸರ್ಕಾರವು ಕಾಲಕಾಲಕ್ಕೆ ಅಧಿಸೂಚಿಸಬಹುದಾದಂತೆ ನಿರ್ಧರಣೆಯ ಸಮಯದ ಮೌಲ್ಯದ ಸವಕಳಿಯನ್ನು ಕಳೆಯುವುದು) ತೆರಿಗೆ ವಿಧಿಸಬೇಕಾಗಿರುತ್ತದೆ.

ಗ್ರಾಮ ಪಂಚಾಯತಿಗಳು ತಮ್ಮ ವಿವೇಚನೆಯ ರೀತ್ಯ ತೆರಿಗೆ, ದರ ಮತ್ತು ಫೀಜುಗಳನ್ನು ಪರಿಷ್ಕರಿಸಿ ವಿಧಿಸುತ್ತಿದ್ದು, ಇದು ಪರಿಣಾಮಕಾರಿಯಲ್ಲದ ತೆರಿಗೆ ನಿರ್ವಹಣಾ ಪದ್ಧತಿಯಾಗಿದ್ದು, ಗ್ರಾಮ ಪಂಚಾಯತಿಗಳು ತೆರಿಗೆ ವಿಧಿಸುವಲ್ಲಿ ಮತ್ತು ತೆರಿಗೆಯನ್ನು ವಸೂಲಿ ಮಾಡುವಲ್ಲಿ ವಿಫಲವಾಗಿರುವುದು ಕಂಡುಬರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ 199ಎ ರಂತೆ ತೆರಿಗೆಗಳು ಮತ್ತು ದರಗಳನ್ನು ಕಟ್ಟಡಗಳು ಮತ್ತು ಭೂಮಿಯ ಸಂಬಂಧದಲ್ಲಿ ಕನಿಷ್ಠ ಎರಡು ವರ್ಷಗಳಿಗೊಮ್ಮೆ ಮತ್ತು ನಿರ್ದಿಷ್ಟಪಡಿಸಿದ ಇತರ ಬಾಬ್ತುಗಳ ಮೇಲೆ ವರ್ಷದಲ್ಲಿ ಕನಿಷ್ಠ ಒಮ್ಮೆ ಪರಿಷ್ಕರಿಸಬಹುದಾಗಿರುತ್ತದೆ.

ಈ ದಿಸೆಯಲ್ಲಿ ತೆರಿಗೆ ಬಾಕಿದಾರರನ್ನು, ಅನಧಿಕೃತ ಮತ್ತು ಕಡಿಮೆ ತೆರಿಗೆ ಪಾವತಿಸಿದವರ ಆಸ್ತಿ ವಿವರಗಳನ್ನು ಪತ್ತೆ ಹಚ್ಚಲು ವಾರ್ಷಿಕವಾರು ಆಸ್ತಿ ತೆರಿಗೆ ವಿವರಗಳನ್ನು ಕ್ರಮಬದ್ಧವಾಗಿ ನಿರ್ವಹಿಸಿ, ಗ್ರಾಮ ಪಂಚಾಯತಿಗಳು ತಮ್ಮ ಬೇಡಿಕೆ, ವಸೂಲಾತಿ ಮತ್ತು ಬಾಕಿ ವಿವರ, ಆಸ್ತಿಪಾಸ್ತಿ ಹಾಗೂ ಹೊಣೆಗಾರಿಕೆಗಳನ್ನು ನಿಖರವಾಗಿ ತೋರಿಸುವಂತಹ ನಮೂನೆಗಳಲ್ಲಿ ತಮ್ಮ ಲೆಕ್ಕಪತ್ರಗಳನ್ನು ಸಾದರಪಡಿಸಿ, ಗ್ರಾಮ ಪಂಚಾಯತಿಯ ನೈಜ ಹಾಗೂ ಸಮರ್ಪಕವಾದ ಆರ್ಥಿಕ ಸ್ಥಿತಿಯನ್ನು ಪ್ರತಿಬಿಂಬಿಸಲು, ದಿನಾಂಕ: 30.07.2017 ರೊಳಗೆ ಕ್ರಮವಹಿಸುವುದು ಕಡ್ಡಾಯವಾಗಿರುತ್ತದೆ. ಅದರಂತೆ

| ಕೊನೆಯ ದಿನಾಂಕ | ಕ್ರಮಗಳು | ವರದಿ ಸಲ್ಲಿಸಬೇಕಾದ ದಿನಾಂಕ/ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|
| 23.04.2017 | ಸಂಬಂಧಿಸಿದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಮಟ್ಟದಲ್ಲಿ ಗ್ರಾಮ ಪಂಚಾಯತಿ ಆಸ್ತಿ ಮತ್ತು ಆಸ್ತಿ ತೆರಿಗೆಯ ಬಗ್ಗೆ ತರಬೇತಿ ಕಾರ್ಯಾಗಾರವನ್ನು ಏರ್ಪಡಿಸುವುದು | 30.04.2017<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು |
| 30.04.2017 | ಆಸ್ತಿಯ ವಿಧಗಳಾದ ವಸತಿ, ವಾಣಿಜ್ಯ, ಕೈಗಾರಿಕೆ, ಇತರೆ ಹಾಗೂ ಆಸ್ತಿಯ ವರ್ಗೀಕರಣದಲ್ಲಿ ಗ್ರಾಮತಾಣಾ, ಪರಿವರ್ತಿತ ಕೃಷಿ ಭೂಮಿ ಮತ್ತು ಸಕ್ಷಮ ಪ್ರಾಧಿಕಾರದ ಅನುಮೋದಿತ ಬಡಾವಣೆ ಮತ್ತು ಸರ್ಕಾರದ ಯೋಜನೆಗಳಲ್ಲಿ ಮಂಜೂರಾದ ಮನೆ/ನಿವೇಶನಗಳ ಮಾಹಿತಿಗಳನ್ನು ನಿಗಧಿತ ನಮೂನೆ-9, ನಮೂನೆ-9ಎ ಮತ್ತು ನಮೂನೆ-11ಎ ರಲ್ಲಿ ಹಾಗೂ ತೆರಿಗೆಗೆ ಒಳಪಡುವ ಕ್ರಮಬದ್ಧವಲ್ಲದ ಆಸ್ತಿಗಳನ್ನು ನಿಗಧಿತ ನಮೂನೆ-11ಬಿಯಲ್ಲಿ ಸಂಪೂರ್ಣವಾಗಿ ದಾಖಲಿಸುವುದು.<br>ಭೂಮಿ ಮತ್ತು ಕಟ್ಟಡಗಳ ತೆರಿಗೆ ಬಾಬ್ತು ಬೇಡಿಕೆ, ವಸೂಲಾತಿ ಮತ್ತು ಬಾಕಿ ವಹಿಯಲ್ಲಿ ಇಲ್ಲಿಯವರೆಗೆ ಬಾಕಿ ಇರುವ ತೆರಿಗೆ ಬಾಬ್ತುಗಳನ್ನು ನಿಖರವಾಗಿ ನಮೂದಿಸುವುದು. | 10.05.2017<br>ಪಂಚಾಯತಿ ಅಭಿವೃದ್ಧಿ ಅಧಿಕಾರಿ |
| 15.05.2017 | ಪಂಚತಂತ್ರ – ಕಛೇರಿ ಪ್ರಗತಿ ವರದಿ – ಗ್ರಾಮ ಪಂಚಾಯತಿಯ ಬೇಡಿಕೆ, ವಸೂಲಾತಿ ಮತ್ತು ಬಾಕಿ ರಿಜಿಸ್ಟರ್‌ಗಳಲ್ಲಿನ ವ್ಯತ್ಯಾಸಗಳನ್ನು ಸರಿಪಡಿಸುವುದು. | 15.05.2017<br>ಸರ್ಕಾರಕ್ಕೆ ಅನುಮತಿ ಕೋರಬೇಕು. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು |
| 22.05.2017 | ಗ್ರಾಮ ಪಂಚಾಯತಿಗಳ ಪರಿಷ್ಕೃತ ತೆರಿಗೆ, ದರ ಮತ್ತು ಶುಲ್ಕಗಳನ್ನು ಜಿಲ್ಲಾ ಮಟ್ಟದ ಪರಿಷ್ಕರಣಾ ಸಮಿತಿಯು ಪರಿಶೀಲಿಸಿ ಕನಿಷ್ಠ ಮತ್ತು ಗರಿಷ್ಠ ದರಗಳನ್ನು ವೈಜ್ಞಾನಿಕವಾಗಿ ನಿಗಧಿಪಡಿಸುವುದು. | 02.06.2017<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು |
| 12.06.2017 | ಗ್ರಾಮ ಪಂಚಾಯತಿಗಳಲ್ಲಿ 199ನೇ ಪ್ರಕರಣದ ಅಡಿಯಲ್ಲಿ ವಿಧಿಸಬಹುದಾದ ತೆರಿಗೆಗಳು ಮತ್ತು ದರಗಳನ್ನು, ಕಟ್ಟಡಗಳು ಮತ್ತು ಭೂಮಿ ಮತ್ತು IV ನೇ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಇತರ ಬಾಬ್ತುಗಳ ಮೇಲೆ ತೆರಿಗೆ, ದರ ಮತ್ತು ಶುಲ್ಕಗಳನ್ನು ನಿಯಮಾನುಸಾರ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ಪರಿಷ್ಕರಿಸುವುದು. | 26.06.2017<br>ಪಂಚಾಯತಿ ಅಭಿವೃದ್ಧಿ ಅಧಿಕಾರಿ |
| 05.07.2017 | ಪರಿಷ್ಕೃತ ತೆರಿಗೆ, ದರ ಮತ್ತು ಶುಲ್ಕಗಳನ್ನು ಗ್ರಾಮ ಸಭೆಯಲ್ಲಿ ಅನುಮೋದಿಸಿ, ಗ್ರಾಮ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ನಿರ್ಣಯ ಅಂಗೀಕರಿಸುವುದು. | 15.07.2017<br>ಪಂಚಾಯತಿ ಅಭಿವೃದ್ಧಿ ಅಧಿಕಾರಿ |
| 20.07.2017 | ಪರಷ್ಕೃತ ಆಸ್ತಿ ತೆರಿಗೆಯನ್ನು ಭೂಮಿ ಮತ್ತು ಕಟ್ಟಡಗಳ ತೆರಿಗೆ ಬಾಬ್ತು ಬೇಡಿಕೆ, ವಸೂಲಾತಿ ಮತ್ತು ಬಾಕಿ ರಿಜಿಸ್ಟರಿನಲ್ಲಿ ನಿಖರವಾಗಿ ನಮೂದಿಸುವುದು. | ಪಂಚಾಯತಿ ಅಭಿವೃದ್ಧಿ ಅಧಿಕಾರಿ |
| 30.07.2017 | ಕೈಗೊಂಡ ಕ್ರಮಗಳ ಬಗ್ಗೆ ಸರ್ಕಾರಕ್ಕೆ ವರದಿ ಸಲ್ಲಿಸುವುದು. | 30.07.2017<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು |

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 199 ರಂತೆ ಪ್ರತಿಯೊಂದು ಗ್ರಾಮ ಪಂಚಾಯತಿಯು, ಗೊತ್ತುಪಡಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ವಿನಾಯತಿಗೊಳಪಟ್ಟು ಮತ್ತು IV ನೇ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿರುವ ಗರಿಷ್ಠ ದರವನ್ನು ಮೀರದಂತೆ, ಹಾಗೂ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕರ್ನಾಟಕ ಸ್ಟ್ಯಾಂಪ್ ಅಧಿನಿಯಮ 1957ರ 45ಬಿ ಪ್ರಕರಣದ ಅಡಿಯಲ್ಲಿ ಜಾರಿಯಲ್ಲಿರುವಂತೆ ಪ್ರಕಟಿಸಲಾದ ಸ್ಥಿರಾಸ್ತಿಗಳು ಮತ್ತು ಕಟ್ಟಡಗಳ ಮಾರ್ಗಸೂಚಿ ಮಾರುಕಟ್ಟೆ ಮೌಲ್ಯ ಮಾಪನಕ್ಕೆ ಸಂಬಂದಿಸಿದಂತೆ ಅನ್ವಯಿಸುವ ವಿಶೇಷ ಸೂಚನೆಗಳನ್ವಯ ದಿನಾಂಕ 01.08.2017 ರಿಂದ ಕಡ್ಡಾಯವಾಗಿ ಗ್ರಾಮ ಪಂಚಾಯತಿಗಳು ಪಂಚಾಯತಿ ಪ್ರದೇಶದ ಪರಿಮಿತಿಗಳೊಳಗಿರುವ, ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಕಟ್ಟಡಗಳು ಮತ್ತು ಭೂಮಿಗಳ ಮೇಲೆ ಸ್ವತ್ತಿನ ಬಂಡವಾಳ ಮೌಲ್ಯದ ಆಧಾರದಲ್ಲಿ ತೆರಿಗೆ ವಿಧಿಸತಕ್ಕದ್ದು. ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ತೆರಿಗೆಗಳು ಮತ್ತು ಫೀಜುಗಳು) ನಿಯಮ 1994 ಹಾಗೂ ಇತ್ತೀಚಿನ ತಿದ್ದುಪಡಿಗನುಸಾರ ಮತ್ತು ಉಲ್ಲೇಖದಲ್ಲಿನ ಸುತ್ತೋಲೆಯನ್ವಯ ಕ್ರಮಕೈಗೊಳ್ಳಬೇಕು.

ಮೇಲೆ ವಿವರಿಸಿದಂತೆ ಕಟ್ಟಡ ನಿರ್ಮಾಣ ದಿನಾಂಕ, ಆಸ್ತಿಯ ಪಾಯದ ವಿಸೀರ್ಣ, ಕಟ್ಟಡ ವಿನ್ಯಾಸ, ನಿವೇಶನ/ಕಟ್ಟಡದ ಒಟ್ಟು ವಿಸ್ತೀರ್ಣ, ನಿವೇಶನ/ಕಟ್ಟಡದ ಚಕ್ಕುಬಂದಿ, ಮಾಲೀಕತ್ವದ ವಿವರಗಳು, ಅನುಭವದಾರರ ವಿವರಗಳು, ಹೊಣೆಗಾರಿಕೆಗಳ ವಿವರಗಳನ್ನು ನಿಖರವಾಗಿ ಸಂಗ್ರಹಿಸಿ, ಕಾಲಬದ್ಧಕರ್ತವ್ಯಗಳನ್ನು ನಿರ್ವಹಿಸಲು ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕಾರ್ಯನಿರ್ವಾಹಕ ಅಧಿಕಾರಿಗಳು, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಸೂಕ್ತ ಕ್ರಮವಹಿಸಲು ಸೂಚಿಸಲಾಗಿದೆ. ತಪ್ಪಿದಲ್ಲಿ ಗ್ರಾಮ ಪಂಚಾಯತಿಗಳ ಅನುದಾನವನ್ನು ತಡೆಹಿಡಿಯಲು ಕ್ರಮವಹಿಸಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ.

ತಮ್ಮ ವಿಶ್ವಾಸಿ

(ಟಿ.ವಿ.ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿಗಳು.
2. ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿಗಳು,
3. ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
3. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ.
4. ಗಣಕ ಕೋಶ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.